ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಐದನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 16ನೇ ಡಿಸೆಂಬರ್, 2014
(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಆರನೇ ಪಟ್ಟಿ
ಆ) ದಿನಾಂಕ 12.12.2014ರ ನಾಲ್ಕನೇ ಪಟ್ಟಿಯಿಂದ ವರ್ಗಾವಣೆಗೊಂಡ ಶ್ರೀ ಎನ್.ಎಚ್. ಕೋನರೆಡ್ಡಿ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 48(42)	:	ನಗರಾಭಿವೃದ್ಧಿ ಸಚಿವರು
ಇ) ದಿನಾಂಕ 15.12.2014ರ ಐದನೇ ಪಟ್ಟಿಯಿಂದ ವರ್ಗಾವಣೆಗೊಂಡ ಶ್ರೀ ಮಂಕಾಳ ಸುಬ್ಬ ವೈದ್ಯ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 68(1642)	:	ಅರಣ್ಯ ಸಚಿವರು
ಈ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಆರನೇ ಪಟ್ಟಿ

2. ವರದಿಯನ್ನೊಪ್ಪಿಸುವುದು

ಶ್ರೀ ತನ್ವೀರ್ ಸೇಠ್ (ಅಧ್ಯಕ್ಷರು, ಕರ್ನಾಟಕ ವಿಧಾನಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ) ಅವರು ಸಮಿತಿಯ 2014-15ನೇ ಸಾಲಿನ ಮೊದಲನೇ ವರದಿಯನ್ನೊಪ್ಪಿಸುವುದು.

3. ಶಾಸನ ರಚನೆ

I. ವಿಧೇಯಕವನ್ನು ಮಂಡಿಸುವುದು

(i) ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾನಿಲಯ (ತಿದ್ದುಪಡಿ) ವಿಧೇಯಕ, 2014
ಶ್ರೀ ಟಿ.ಬಿ.ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ,ಪಶುಸಂಗೋಪನೆ ಮತ್ತು ಮುಜರಾಯಿ ಸಚಿವರು) ಅವರು:-

ಅ) 2014ನೇ ಸಾಲಿನ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾನಿಲಯ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

ಮು.ತಿ.ನೋ.,.

II. ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1. ಕರ್ನಾಟಕ ಪೌರ ಸಭೆಗಳು ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕ, 2014
ಡಾ॥ ಖಮರುಲ್ ಇಸ್ಲಾಂ (ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು) ಅವರು:-

ಅ) 2014ನೇ ಸಾಲಿನ ಕರ್ನಾಟಕ ಪೌರ ಸಭೆಗಳು ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. ಕರ್ನಾಟಕ ಭೂ ಸುಧಾರಣೆ ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ)ವಿಧೇಯಕ, 2014
ಶ್ರೀ ವಿ. ಶ್ರೀನಿವಾಸ ಪ್ರಸಾದ್ (ಕಂದಾಯ ಸಚಿವರು) ಅವರು:-

ಅ) 2014ನೇ ಸಾಲಿನ ಕರ್ನಾಟಕ ಭೂ ಸುಧಾರಣೆ ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

3. ಕರ್ನಾಟಕ ನ್ಯಾಯಾಲಯ ಶುಲ್ಕಗಳ ಮತ್ತು ದಾವೆಗಳ ಮೌಲ್ಯ ನಿರ್ಣಯ (ತಿದ್ದುಪಡಿ) ವಿಧೇಯಕ, 2014
ಶ್ರೀ ಟಿ.ಬಿ.ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ,ಪಶುಸಂಗೋಪನೆ ಮತ್ತು ಮುಜರಾಯಿ ಸಚಿವರು) ಅವರು:-

ಅ) 2014ನೇ ಸಾಲಿನ ಕರ್ನಾಟಕ ನ್ಯಾಯಾಲಯ ಶುಲ್ಕಗಳ ಮತ್ತು ದಾವೆಗಳ ಮೌಲ್ಯ ನಿರ್ಣಯ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

4. ಭಾರತ ಉತ್ತರಾಧಿಕಾರ (ಕರ್ನಾಟಕ ತಿದ್ದುಪಡಿ) ವಿಧೇಯಕ, 2014
ಶ್ರೀ ಟಿ.ಬಿ.ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ,ಪಶುಸಂಗೋಪನೆ ಮತ್ತು ಮುಜರಾಯಿ ಸಚಿವರು) ಅವರು:-

ಅ) 2014ನೇ ಸಾಲಿನ ಭಾರತ ಉತ್ತರಾಧಿಕಾರ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

5. ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾನಿಲಯ (ತಿದ್ದುಪಡಿ) ವಿಧೇಯಕ, 2014
ಶ್ರೀ ಟಿ.ಬಿ.ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ,ಪಶುಸಂಗೋಪನೆ ಮತ್ತು ಮುಜರಾಯಿ ಸಚಿವರು) ಅವರು:-

ಅ) 2014ನೇ ಸಾಲಿನ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾನಿಲಯ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಮು.ತಿ.ನೋ.,.

4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

ಉತ್ತರ ಕರ್ನಾಟಕದ ಸರ್ವತೋಮುಖ ಅಭಿವೃದ್ಧಿಗೆ ಸಂಬಂಧಿಸಿದಂತೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದ ಉತ್ತರ.

5. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಬಿ.ಬಿ. ನಿಂಗಯ್ಯ ಅವರು ಮೂಡಿಗೆರೆ ವಿಧಾನಸಭಾ ಕ್ಷೇತ್ರದ ಕಳಸ ಪಟ್ಟಣಕ್ಕೆ ಶಾಶ್ವತ ಕುಡಿಯುವ ನೀರನ್ನು ಒದಗಿಸಲು NRDWP ಯೋಜನೆ ಅಡಿಯಲ್ಲಿನ ಕಾಮಗಾರಿಯು ಪೂರ್ಣಗೊಳ್ಳದಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.
2. ಶ್ರೀ ಹೆಚ್.ಡಿ. ರೇವಣ್ಣ ಅವರು ಹಾಸನ ಜಿಲ್ಲೆಯ ಚನ್ನರಾಯಪಟ್ಟಣ ತಾಲ್ಲೂಕು ದಂಡಿಗನಹಳ್ಳಿ ಹೋಬಳಿ ಕಾಚೇನಹಳ್ಳಿ ಏತ ನೀರಾವರಿ ಯೋಜನೆಯು ಕುಂಠಿತಗೊಂಡಿರುವ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.
3. ಶ್ರೀಯುತರುಗಳಾದ ಸಿ. ಎನ್. ಬಾಲಕೃಷ್ಣ ಮತ್ತು ಹೆಚ್.ಡಿ. ರೇವಣ್ಣ ಅವರುಗಳು ಹಾಸನ ಜಿಲ್ಲೆಯ ಚನ್ನರಾಯಪಟ್ಟಣ, ಹೊಳೆನರಸೀಪುರ ಮತ್ತು ಹಾಸನ ತಾಲ್ಲೂಕುಗಳಲ್ಲಿ ಕುಡಿಯುವ ನೀರಿಗೆ ಸಮಸ್ಯೆಯಿರುವುದರಿಂದ 353 ಕೊಳವೆ ಬಾವಿ ಕಾಮಗಾರಿಗಳಿಗೆ ಅನುಮೋದನೆ ನೀಡುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.
4. ಶ್ರೀಯುತರುಗಳಾದ ಮಧು ಎಸ್. ಬಂಗಾರಪ್ಪ, ವೈ.ಎಸ್.ವಿ.ದತ್ತಾ, ಎ.ಬಿ.ರಮೇಶ್ ಬಂಡಿಸಿದ್ದೇಗೌಡ, ಸುಧಾಕರ್‌ಲಾಲ್ ಮತ್ತು ಇತರರು ರಾಜ್ಯದಲ್ಲಿ ಜಿಲ್ಲಾ ಪಂಚಾಯತ್‌ಗಳ ಮೂಲಕ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರಿನ ಯೋಜನೆಯನ್ನು ಕಾರ್ಯಗತ ಮಾಡುತ್ತಿದ್ದು, ಇದಕ್ಕೆ ಸಂಬಂಧಪಟ್ಟಂತೆ ಕ್ರಿಯಾ ಯೋಜನೆಯನ್ನು ತಯಾರಿಸಿ ಆಯಾ ಕ್ಷೇತ್ರದ ಶಾಸಕರ ಅನುಮೋದನೆಯನ್ನು ಪಡೆಯದೆ ಅನುದಾನವನ್ನು ದುರ್ಬಳಕೆ ಮಾಡುತ್ತಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.
5. ಶ್ರೀ ಕೆ. ಎಂ. ಕೃಷ್ಣಾರೆಡ್ಡಿ ಅವರು ಚಿಂತಾಮಣಿ ತಾಲ್ಲೂಕಿನಾದ್ಯಂತ 191 ಕೊಳವೆ ಬಾವಿಗಳಲ್ಲಿ 81 ಕೊಳವೆ ಬಾವಿಗಳು ವಿಫಲವಾಗಿರುವುದರಿಂದ, ಈ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಿಂದಾಗಿ ಸಾರ್ವಜನಿಕರಿಗೆ ತೊಂದರೆಯುಂಟಾಗಿರುವ ಬಗ್ಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.
6. ಶ್ರೀ ಸಂಜಯ ಬಿ. ಪಾಟೀಲ್ ಅವರು ರಾಜ್ಯದಲ್ಲಿ ಹೊಸ ನೇಕಾರರ ಕಾಲೋನಿಗಳನ್ನು ನಿರ್ಮಿಸುವ ಹಾಗೂ ಆ ಕಾಲೋನಿಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಬಗ್ಗೆ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,

7. ಶ್ರೀ ಎನ್. ಚಲುವರಾಯಸ್ವಾಮಿ ಅವರು ಬೆಂಗಳೂರು-ಮಂಗಳೂರು ರಾಷ್ಟ್ರೀಯ ಹೆದ್ದಾರಿ 48ರಲ್ಲಿ ನಾಗಮಂಗಲ ತಾಲ್ಲೂಕಿನ ಕದಬಹಳ್ಳಿ ಬಳಿ ಅಂಡರ್‌ಪಾಸ್ ಮತ್ತು ಸರ್ವೀಸ್ ರಸ್ತೆ ನಿರ್ಮಿಸುವ ಬಗ್ಗೆ ಹಾಗೂ ಬೆಳ್ಳೂರು ಕ್ರಾಸ್ ನಂತರ ಟೋಲ್ ಪ್ಲಾಜಾವನ್ನು ನಿರ್ಮಿಸುವುದರ ಬಗ್ಗೆ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.
8. ಶ್ರೀ ಕೆ.ಜಿ. ಬೋಪಯ್ಯ ಅವರು ಸಹಕಾರ ಇಲಾಖೆಯ ಸುತ್ತೋಲೆ ಸಂಖ್ಯೆ ಆರ್.ಸಿ.ಎಸ್/ಸಿಆರ್‌ಡಿ/1/2013-14 ರಂತೆ ದಿನಾಂಕ 28.08.2014ರಂದು ಹೊರಡಿಸಿರುವ ಸುತ್ತೋಲೆಯನ್ನು ಹಿಂಪಡೆಯುವ ಬಗ್ಗೆ ಸಹಕಾರ ಮತ್ತು ಸಕ್ಕರೆ ಸಚಿವರ ಗಮನ ಸೆಳೆಯುವುದು.
9. ಶ್ರೀ ಗೋವಿಂದ ಎಂ. ಕಾರಜೋಳ ಅವರು ಮಾಜಿ ದೇವದಾಸಿಯರಿಗೆ ಮಂಜೂರು ಮಾಡಿ ಬಿಡುಗಡೆ ಮಾಡಿದ ಮಾಸಾಶನವನ್ನು ಕಳೆದ 9 ತಿಂಗಳಿಂದ ನೀಡದಿದ್ದರಿಂದ ಬಡ ಮಹಿಳೆಯರಿಗೆ ತೊಂದರೆಯುಂಟಾಗಿರುವ ಬಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರ ಗಮನ ಸೆಳೆಯುವುದು.
10. ಶ್ರೀಮತಿ ವಿನೀಶಾ ನೆರೋ ಅವರು ಬೆಂಗಳೂರಿನ ಕಾಕ್ಸ್‌ಟೌನ್ ಮಾರುಕಟ್ಟೆಯನ್ನು ಸ್ಥಳಾಂತರಿಸುವ ಬಗ್ಗೆ ಹಾಗೂ ಬೆಂಗಳೂರಿನಲ್ಲಿರುವ 11 ಮಾರುಕಟ್ಟೆಗಳಲ್ಲಿ ಅಗತ್ಯ ಸೌಲಭ್ಯಗಳನ್ನು ಒದಗಿಸುವ ಬಗ್ಗೆ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.
11. ಶ್ರೀ ಕೆ.ಬಿ. ಪ್ರಸನ್ನ ಕುಮಾರ್ ಅವರು ಶಿವಮೊಗ್ಗ ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ನಗರ ಸಾರಿಗೆ ವ್ಯವಸ್ಥೆ ಇಲ್ಲದೆ ನಗರದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಸಾರಿಗೆ ಸಚಿವರ ಗಮನ ಸೆಳೆಯುವುದು.
12. ಶ್ರೀ ಎಂ.ಟಿ. ಕೃಷ್ಣಪ್ಪ ಅವರು ತುರುವೇಕೆರೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಮಲಘಟ್ಟ ಕೆರೆಯನ್ನು ಪ್ರವಾಸಿ ತಾಣವಾಗಿ ಪರಿಗಣಿಸುವ ಬಗ್ಗೆ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.
13. ಶ್ರೀ ಪಿ ರಾಜೀವ್ ಅವರು ಬೆಳಗಾವಿ ಜಿಲ್ಲೆ ರಾಯಭಾಗ ತಾಲ್ಲೂಕಿನಲ್ಲಿ ರೈತರು ನೀರಾವರಿ ಯೋಜನೆಯಡಿ ವಿವಿಧ ಜಲಮೂಲದಿಂದ ಜಮೀನುಗಳಿಗೆ ಬೇರೆಯವರ ಜಮೀನುಗಳ ಮೂಲಕ ಪೈಪ್ ಲೈನ್ ಕಾಮಗಾರಿ ಮಾಡಲು ಅವಕಾಶ ನೀಡದಿರುವ ವ್ಯಕ್ತಿಗಳ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರ ಗಮನ ಸೆಳೆಯುವುದು.
14. ಶ್ರೀ ಆರ್. ಅಶೋಕ್ ಅವರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ದಿನಾಂಕ: 25.11.2014ರಂದು ಸಾರ್ವಜನಿಕ ಸೇವೆಗಾಗಿ ಇದ್ದ ಆಂಬುಲೆನ್ಸ್ 108 ಸೇವೆಗಳ ವಾಹನಗಳ ಮೇಲೆ ಮುಖ್ಯಮಂತ್ರಿಗಳ ಹಾಗೂ ಆರೋಗ್ಯ ಸಚಿವರ ಭಾವ ಚಿತ್ರಗಳನ್ನು ಹಾಕಿರುವ ಬಗ್ಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

ಮ.ತಿ.ನೋ.,.

15. ಶ್ರೀ ಎಸ್. ಸುರೇಶಕುಮಾರ್ ಅವರು ಟ್ರಯಲ್ ರೂಂ, ಖಾಸಗಿ ಹೋಟೆಲ್, ಮತ್ತು ಮಹಿಳೆಯರ ಶೌಚಾಲಯದಲ್ಲಿ ರಹಸ್ಯ ಕ್ಯಾಮೆರಾಗಳನ್ನು ಅಳವಡಿಸಲಾಗಿದ್ದ ಪ್ರಕರಣಗಳಲ್ಲಿ ಹಾಗೂ ಮಹಿಳೆಯರ ಮತ್ತು ಹೆಣ್ಣು ಮಕ್ಕಳ ಮೇಲೆ ನಡೆಯುತ್ತಿರುವ ಅತ್ಯಾಚಾರ ಮತ್ತು ಲೈಂಗಿಕ ದೌರ್ಜನ್ಯ ಪ್ರಕರಣಗಳಲ್ಲಿ ಆರೋಪಿಗಳ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಗೃಹ ಸಚಿವರ ಗಮನ ಸೆಳೆಯುವುದು.
16. ಶ್ರೀ ಬಿ.ಬಿ ಚಿಮ್ಮನಕಟ್ಟಿ ಅವರು ಬಾಗಲಕೋಟೆ ಜಿಲ್ಲೆಯ ಬದಾಮಿಯಲ್ಲಿ ಲಲಿತಕಲಾ ವಿಶ್ವವಿದ್ಯಾನಿಲಯವು ಕಾರ್ಯಾರಂಭವಾಗದಿರುವ ಬಗ್ಗೆ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.
17. ಡಾ॥ ಎ.ಬಿ. ಮಾಲಕರೆಡ್ಡಿ ಅವರು ಯಾದಗಿರಿ, ಚಿಕ್ಕಬಳ್ಳಾಪುರ,ರಾಮನಗರ ಜಿಲ್ಲಾ ಕೇಂದ್ರಗಳ ನಗರ ಯೋಜನಾ ಪ್ರಾಧಿಕಾರಗಳನ್ನು ನಗರಾಭಿವೃದ್ಧಿ ಪ್ರಾಧಿಕಾರಗಳನ್ನಾಗಿ ಮೇಲ್ದರ್ಜೆಗೇರಿಸುವ ಬಗ್ಗೆ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.
18. ಶ್ರೀ ಮಾಲಿಕಯ್ಯ ವಿ. ಗುತ್ತೇದಾರ ಅವರು ಅಫಜಲಪೂರ ತಾಲ್ಲೂಕಿನಲ್ಲಿ ಅವಶ್ಯವಿರುವ ಗ್ರಾಮಗಳಿಗೆ ಸ್ಮಶಾನಕ್ಕೆ ಸೂಕ್ತ ಜಾಗವನ್ನು ಒದಗಿಸುವ ಬಗ್ಗೆ ಕಂದಾಯ ಸಚಿವರ ಗಮನ ಸೆಳೆಯುವುದು.
19. ಶ್ರೀ ಕೆ.ಬಿ.ಕೋಳಿವಾಡ್ ಅವರು ರಾಜ್ಯದ ಪ್ರತಿಯೊಂದು ಗ್ರಾಮಗಳಲ್ಲಿ ನಗರದ ಪ್ರದೇಶದಲ್ಲಿರುವಂತೆ ಗ್ರಾಮೀಣ ಆಶ್ರಯ ಸಮಿತಿಯನ್ನು ಸ್ಥಾಪಿಸುವ ಬಗ್ಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.
20. ಶ್ರೀ ಸಿ.ಟಿ. ರವಿ ಅವರು ಗ್ರಾಮೀಣ ಪುನರ್ ವಸತಿ ಯೋಜನೆಯಡಿ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವಿವಿಧೋದ್ದೇಶ ಮತ್ತು ಗ್ರಾಮೀಣ ಪುನರ್ವಸತಿ ಕಾರ್ಯಕರ್ತರಿಗೆ ಗೌರವ ಧನವನ್ನು ಹೆಚ್ಚಿಸುವ ಹಾಗೂ ಇವರುಗಳನ್ನು ಖಾಯಂಗೊಳಿಸುವ ಬಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರ ಗಮನ ಸೆಳೆಯುವುದು.
21. ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಕಾರ್ಮಿಕರ ಅಭಿವೃದ್ಧಿಗಾಗಿ ಜಾರಿಗೆ ತಂದಿರುವ ಹಲವಾರು ಸೌಲಭ್ಯಗಳು/ಯೋಜನೆಗಳ ಮಾಹಿತಿಗಳನ್ನು ಕಾರ್ಮಿಕರಿಗೆ ಒದಗಿಸುವ ಬಗ್ಗೆ ಕಾರ್ಮಿಕ ರಾಜ್ಯ ಸಚಿವರ ಗಮನ ಸೆಳೆಯುವುದು.
22. ಶ್ರೀ ಅರಬೈಲ್ ಶಿವರಾಮ್ ಹೆಬ್ಬಾರ್ ಅವರು ಕುಯ್ಕ ಮತ್ತು ಹಾಡಿ ಜಾಗಗಳು ಉತ್ತರ ಕನ್ನಡ ಜಿಲ್ಲೆಯಲ್ಲಿ ಬಹಳ ದೊಡ್ಡ ಪ್ರಮಾಣದಲ್ಲಿರುವುದರಿಂದ ಕರ್ನಾಟಕ ಭೂ ಕಂದಾಯ ಕಾಯ್ದೆಯನ್ನು ಬದಲಾವಣೆ ಮಾಡುವ ಬಗ್ಗೆ ಕಂದಾಯ ಸಚಿವರ ಗಮನ ಸೆಳೆಯುವುದು.
23. ಶ್ರೀ ಅರವಿಂದ ಚಂದ್ರಕಾಂತ ಬೆಲ್ಲದ್ ಅವರು ರಾಜ್ಯ ಶಾಲಾ ದಾಖಲಾತಿಗಳಲ್ಲಿ ವಿದ್ಯಾರ್ಥಿಗಳ ಹೆಸರು, ತಂದೆಯ ಹೆಸರು ಹಾಗೂ ಅಡ್ಡ ಹೆಸರುಗಳಿಂದ ಸಣ್ಣ ಪುಟ್ಟ ತಿದ್ದುಪಡಿಗೆ ನ್ಯಾಯಾಲಯ ಡಿಕ್ರಿಯನ್ನು ಅನುಷ್ಠಾನ ಮಾಡುತ್ತಿರುವುದರಿಂದ ಬಡ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವ ಬಗ್ಗೆ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,.

24. ಡಾ॥ ವಿಶ್ವನಾಥ ಈ. ಪಾಟೀಲ್ ಅವರು ರೈತರು ಬೆಳೆದ ತಾಳೆ ಬೆಳೆಗೆ ಸೂಕ್ತ ಬೆಲೆಯಿಲ್ಲದೆ ತಾಳೆ ಬೆಳೆಗಾರರು ಸಂಕಷ್ಟಕ್ಕೀಡಾಗಿರುವುದರಿಂದ ಬೆಳೆಗೆ ಬೆಂಬಲ ಬೆಲೆಯಾಗಿ ರೂ.15000ಗಳನ್ನು ಸರ್ಕಾರ ಘೋಷಿಸಿರುವ ಬಗ್ಗೆ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರ ಗಮನ ಸೆಳೆಯುವುದು.

25. ಶ್ರೀ ಈಶ್ವರ ಬಿ. ಖಂಡ್ರೆ ಅವರು ಬೀದರ್ ಜಿಲ್ಲೆಯಲ್ಲಿನ ನಗರ ಸ್ಥಳೀಯ ಸಂಸ್ಥೆಗಳ ಅಭಿವೃದ್ಧಿಗಾಗಿ ಮುಖ್ಯಮಂತ್ರಿಗಳ ಸಣ್ಣ ಮತ್ತು ಮಧ್ಯಮ ಪಟ್ಟಣ ಅಭಿವೃದ್ಧಿ ಯೋಜನೆಯ ನಗರೋತ್ಥಾನ ಹಂತ-2 ರ ಕಾಮಗಾರಿಯ ನಿರ್ವಹಣೆ ಸಲಹೆಗಾರ ಪಿ.ಎಂ.ಸಿ ಕನ್ಸಲ್ಟೆನ್ಸಿಯವರ ನಿರ್ಲಕ್ಷತನದಿಂದ ಸ್ಥಗಿತಗೊಂಡಿರುವ ಬಗ್ಗೆ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

6. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಜಗದೀಶ ಶೆಟ್ಟರ್, ಬಸವರಾಜ ಬೊಮ್ಮಾಯಿ, ಕೆ.ಜಿ.ಬೋಪಯ್ಯ, ಸಿ.ಟಿ.ರವಿ, ವಿ.ಸುನೀಲ್‌ಕುಮಾರ್ ಹಾಗೂ ಇತರರು ಪಶ್ಚಿಮ ಘಟ್ಟಗಳ ಸಂರಕ್ಷಣೆ ಕುರಿತು ಡಾ॥ ಕಸ್ತೂರಿ ರಂಗನ್ ನೀಡಿರುವ ವರದಿ ಅನುಷ್ಠಾನದಿಂದಾಗಿ ಪಶ್ಚಿಮ ಘಟ್ಟಗಳಿಗೆ ಹೊಂದಿಕೊಂಡಿರುವ ಜಿಲ್ಲೆಗಳ ಜನರಿಗೆ ಅನ್ಯಾಯವಾಗದಂತೆ ಅವರನ್ನು ಒಕ್ಕಲೆಬ್ಬಿಸದಂತೆ ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳ ಬಗ್ಗೆ ಚರ್ಚೆ.
2. ಶ್ರೀಯುತರುಗಳಾದ ಕೆ.ಎಂ.ಶಿವಲಿಂಗೇಗೌಡ, ವೈ.ಎನ್. ರುದ್ರೇಶ್‌ಗೌಡ ಮತ್ತು ಹೆಚ್.ಡಿ. ಕುಮಾರಸ್ವಾಮಿ ಅವರುಗಳು ರಾಜ್ಯದ ಬಹುಹಳ್ಳಿ ಕುಡಿಯುವ ನೀರಿನ ಡಿಬಿಒಟಿ ವ್ಯವಸ್ಥೆಯಲ್ಲಿ ಅರಸೀಕೆರೆ ತಾಲ್ಲೂಕಿನ 477 ಹಳ್ಳಿಗಳಿಗೆ ಟೆಂಡರ್ ಪ್ರಕ್ರಿಯೆ ಹಾಗೂ ಶಂಕು ಸ್ಥಾಪನೆ ಮುಗಿದಿದ್ದರೂ ಕಾರ್ಯರೂಪಕ್ಕೆ ಬಾರದಿರುವ ಬಗ್ಗೆ ಚರ್ಚೆ.
3. ಶ್ರೀಯುತರುಗಳಾದ ಕೆ.ಎಸ್.ಪುಟ್ಟಣ್ಣಯ್ಯ, ಎಂ.ರಾಜಣ್ಣ ಮತ್ತು ಉಮೇಶ್ ವಿ. ಕತ್ತಿ ಅವರುಗಳು ಸುವರ್ಣ ಗ್ರಾಮ ಯೋಜನೆಯ ಬದಲಾಗಿ ವಿಕಾಸ ಗ್ರಾಮ ಯೋಜನೆಯನ್ನು ಜಾರಿಗೆ ತಂದಿರುವುದರಿಂದ ಗ್ರಾಮಾಂತರ ಪ್ರದೇಶ ಜನರಿಗೆ ಮೂಲಭೂತ ಸೌಕರ್ಯಗಳು ದೊರೆಯದಿರುವ ಬಗ್ಗೆ ಚರ್ಚೆ.

ಪಿ. ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(www.kar.nic.in/kla)